ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೬**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಸೋಮವಾರ, ದಿನಾಂಕ: ೦೬ನೇ ಜುಲೈ, ೨೦೧೫**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ವಾಯುವ್ಯ ಸಾರಿಗೆ ಸಂಸ್ಥೆಯಲ್ಲಿ ನಡೆದಿರುವ ಅವ್ಯವಹಾರಗಳ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೭೬ (೩೫೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಾಯುವ್ಯ ಸಾರಿಗೆ ಸಂಸ್ಥೆ ಕಳೆದ ೩ ವರ್ಷದಿಂದ ಗಳಿಸಿದ ಲಾಭ / ನಷ್ಟ ಎಷ್ಟು ; ಈ ಸಂಸ್ಥೆ ಲಾಭದಲ್ಲಿ ನಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)

(ಆ) ಈ ಸಂಸ್ಥೆಯಲ್ಲಿ ಬಿಡಿ ಭಾಗಗಳಿಗೆ ಸಂಬಂಧಿಸಿದಂತೆ ಅವ್ಯವಹಾರ ನಡೆದಿದೆಯೇ; ಎಷ್ಟು ಮೊತ್ತದ ಅವ್ಯವಹಾರ ನಡೆದಿದೆ ; ಈ ಅವ್ಯವಹಾರಕ್ಕೆ ಕಾರಣವಾದ ಅಧಿಕಾರಿಗಳು ಮತ್ತು ನೌಕರರು ಯಾರು ; ಇವರುಗಳ ಮೇಲೆ ಕೈಗೊಂಡ ಕ್ರಮಗಳೇನು ; ಈ ನಷ್ಟವನ್ನು ಅವರುಗಳಿಂದ ಭರಿಸಿಕೊಳ್ಳಲಾಗುವುದೇ ; (ವಿವರ ಒದಗಿಸುವುದು)

(ಇ) ಈ ಸಂಸ್ಥೆಯಲ್ಲಿ ನಕಲಿ ಟಿಕೆಟ್ ಮುದ್ರಿಸಿ ಬಳಸಲಾಗುತ್ತಿದೆಯೇ ; ಎಷ್ಟು ಟಿಕೆಟ್ ಇಲ್ಲದ ಪ್ರಯಾಣಿಕರಿಂದ ದಂಡ ವಸೂಲಿ ನಡೆದಿದೆ ? (ವಿವರ ಒದಗಿಸುವುದು)

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಜಾತಿವಾರು ಇರುವ ಸ್ಮಶಾನಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೭೭ (೭೫೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಯಾವ ಯಾವ ತಾಲ್ಲೂಕಿನ, ಯಾವ ಯಾವ ಗ್ರಾಮಗಳಲ್ಲಿ ದಲಿತರಿಗೆ ಸ್ಮಶಾನಕ್ಕೆ ವ್ಯವಸ್ಥೆ ಇದೆ ; ಯಾವ ಯಾವ ಗ್ರಾಮಗಳಲ್ಲಿ ಇಲ್ಲ ; (ಪ್ರತಿ ಗ್ರಾಮದ ಸ್ಥಿತಿಗತಿಯ ವಿವರ ನೀಡುವುದು)

(ಆ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಹಿಂದೂ, ಸರ್ವ ಜಾತಿ ಜನಾಂಗದವರು ಬಳಸಿಕೊಳ್ಳುತ್ತಿರುವ ಸ್ಮಶಾನಗಳು ಯಾವ ಯಾವ ಗ್ರಾಮದಲ್ಲಿವೆ ? (ತಾಲ್ಲೂಕುವಾರು ವಿವರ ನೀಡುವುದು)

## ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸ್ಥಾಪನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೭೮ (೭೮೫) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ೨೦೧೫–೧೬ನೇ ಶೈಕ್ಷಣಿಕ ವರ್ಷದಲ್ಲಿ ಎಷ್ಟು ಕಾಲೇಜುಗಳನ್ನು ಪ್ರಾರಂಭಿಸಲು ಎಂ.ಸಿ.ಐ. (ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾ) ಅನುಮತಿ ನೀಡಿದೆ ;

(ಇ) ರಾಜ್ಯದಲ್ಲಿ ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಯೋಜನೆ ರೂಪಿಸಲಾಗಿದೆಯೇ ; ಮುಂದಿನ ಶೈಕ್ಷಣಿಕ ವರ್ಷದಲ್ಲಿ ಎಷ್ಟು ವೈದ್ಯಕೀಯ ಕಾಲೇಜುಗಳನ್ನು ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ ;

(ಈ) ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ಎಷ್ಟು ವಿದ್ಯಾರ್ಥಿಗಳ ಪ್ರವೇಶಾತಿಗೆ (ಇನ್‌ಟೇಕ್) ಎಂ.ಸಿ.ಐ. ಅನುಮತಿ ನೀಡಲಾಗಿದೆ ; (ಕಾಲೇಜುವಾರು ಮಾಹಿತಿ ನೀಡುವುದು)

(ಉ) ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಸದರಿ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಋ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಕ್ಕಾಗಿ ನಿಗಧಿಪಡಿಸಲಾದ ಅನುದಾನದ ಮೊತ್ತವೆಷ್ಟು ; ಬಿಡುಗಡೆಗೊಳಿಸಲಾದ ಮೊತ್ತವೆಷ್ಟು ? (ಕಾಲೇಜುವಾರು ಮಾಹಿತಿ ನೀಡುವುದು)

## ೨೦೧೪–೧೫ನೇ ಸಾಲಿನಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಆಹಾರ ಮತ್ತು ನಾಗರಿಕ ಪೂರೈಕೆ ಯೋಜನೆಗಳ ಬಗ್ಗೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೯ (೭೬೩) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫ನೇ ಸಾಲಿನಲ್ಲಿ ಇಲ್ಲಿಯವರೆಗೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಅನುಷ್ಠಾನಗೊಂಡ ಯೋಜನೆಗಳಾವುವು ; ಅವುಗಳಿಗೆ ವೆಚ್ಚ ಮಾಡಿದ ಹಣವೆಷ್ಟು ; (ಯೋಜನಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಪಡಿತರ ಚೀಟಿ ವಿತರಣೆ ಸಮರ್ಪಕವಾಗಿ ನಡೆಯುತ್ತಿದೆಯೇ ; ಇದುವರೆಗೆ ವಿತರಣೆ ಮಾಡಿರುವ ಪ್ರಗತಿಯೇನು ;

(ಇ) ಪಡಿತರ ಚೀಟಿಯ ವಿತರಣೆಯಲ್ಲಿ ಲೋಪಗಳನ್ನು ಪತ್ತೆ ಮಾಡಲಾಗಿದೆಯೇ; ಇವುಗಳನ್ನು ಸರಿಪಡಿಸಲು ತೆಗೆದುಕೊಂಡ ಕ್ರಮಗಳೇನು ?

## ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೮೦ (೬೦೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕರ್ನಾಟಕ ಮತ್ತು ಹೈದರಾಬಾದ್ ಕರ್ನಾಟಕ ಜಿಲ್ಲೆಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳು ಸಮರ್ಪಕವಾಗಿಲ್ಲದಿರುವುದು ಮತ್ತು ಸರಬರಾಜು ಇಲ್ಲವೆಂದು ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆಸ್ಪತ್ರೆಗಳಿಗೆ ಒದಗಿಸಲಾದ ಯಂತ್ರೋಪಕರಣಗಳ ಕುರಿತು

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮೧ (೩೫೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳಿಂದ ಸರ್ಕಾರಿ ಆಸ್ಪತ್ರೆಗಳಿಗೆ ರೋಗಗಳ ಪತ್ತೆ ಹಚ್ಚುವಿಕೆ ಮತ್ತು ಚಿಕಿತ್ಸೆ ದೃಷ್ಟಿಯಿಂದ ಒದಗಿಸಲಾದ ಉಪಕರಣಗಳು ಯಾವುವು ; ಯಾವ ಯಾವ ಆಸ್ಪತ್ರೆಗಳಿಗೆ ಉಪಕರಣ / ಸಲಕರಣೆಗಳನ್ನು ಒದಗಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಖರೀದಿಸಲಾದ ಉಪಕರಣಗಳಿಗೆ ವಿನಿಯೋಗಿಸಿದ ಹಣವೆಷ್ಟು ; ಪ್ರಸ್ತುತ ಈ ಉಪಕರಣಗಳನ್ನು ಉಪಯೋಗಿಸಿ ನಿರ್ವಹಿಸಲು ಅಗತ್ಯ ತಾಂತ್ರಿಕ ಸಿಬ್ಬಂದಿಯ ಕೊರತೆ ಇರುವುದು ನಿಜವೇ ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ;

(ಇ) ಕಳೆದ ೨ ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯ ಆಸ್ಪತ್ರೆ ಕೇಂದ್ರಗಳಿಗೆ ಸರ್ಕಾರವು ಸೇರಿದಂತೆ ಇತರ ಮೂಲಗಳಿಂದ ಬಂದ ಅನುದಾನವೆಷ್ಟು ; ಯಾವ ಯಾವ ಯೋಜನೆಗಳಲ್ಲಿ ಈ ಅನುದಾನವನ್ನು ಬಳಕೆ ಮಾಡಲಾಗಿದೆ ? (ವಿವರ ನೀಡುವುದು)

## ಸಾರಿಗೆ ನಿಗಮಗಳ ನೌಕರರಿಗೆ ವರ್ಗಾವಣೆ ನೀತಿ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೮೨ (೩೫೩) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಾರಿಗೆ ನಿಗಮಗಳ ಅಧಿಕಾರಿ / ನೌಕರರಿಗೆ ವರ್ಗಾವಣೆ ನೀತಿಯನ್ನು ಸರ್ಕಾರ ಜಾರಿಗೆ ತಂದಿದೆಯೇ ; ಜಾರಿಗೊಳಿಸಿದ್ದಲ್ಲಿ ಇದು ಯಾವಾಗಿನಿಂದ ಜಾರಿಗೆ ಬಂದಿರುತ್ತದೆ ;

(ಆ) ಸದರಿ ವರ್ಗಾವಣೆ ನೀತಿಯಲ್ಲಿ ಅಳವಡಿಸಿರುವ ಅಂಶಗಳು ಹಾಗೂ ಮಾನದಂಡಗಳೇನು ;

(ಇ) ಹಾಗಿದ್ದಲ್ಲಿ, ಇದುವರೆವಿಗೂ ಇದ್ದ ಗೊಂದಲಗಳು ಬಗೆಹರಿದು ಒಂದು ವಿಭಾಗದಿಂದ ಮತ್ತೊಂದು ವಿಭಾಗಕ್ಕೆ ಹಾಗೂ ಒಂದು ಸಾರಿಗೆ ನಿಗಮದಿಂದ ಮತ್ತೊಂದು ಸಾರಿಗೆ ನಿಗಮಕ್ಕೆ ಸರಳವಾಗಿ ವರ್ಗಾವಣೆ ಮಾಡಬಹುದೇ ;

(ಈ) ಇಂತಹ ಕೋರಿಕೆಯಿಂದ ಒಂದೇ ವಿಭಾಗಕ್ಕೆ ಅಥವಾ ಒಂದೇ ನಿಗಮಕ್ಕೆ ಹೆಚ್ಚಿನ ವರ್ಗಾವಣೆ ಮನವಿಗಳು ಒತ್ತಡಗಳು ಬಂದಲ್ಲಿ ಯಾವ ರೀತಿ ಕ್ರಮ ಜರುಗಿಸಲಾಗುವುದು ; (ವಿವರ ಒದಗಿಸುವುದು)

(ಉ) ಸಾರಿಗೆ ಇಲಾಖೆಯ ಸಿಬ್ಬಂದಿಗಳ ಮೇಲೆ ಬೀಳುತ್ತಿರುವ ಅತಿಯಾದ ಒತ್ತಡ ಮತ್ತು ಅಧಿಕಾರಿಗಳ ದಬ್ಬಾಳಿಕೆಗಳಿಂದ ಸರಿಯಾಗಿ ಕಾರ್ಯ ನಿರ್ವಹಿಸಲು ಸಾಧ್ಯವಾಗದೇ ಅಪಘಾತಗಳು ಆಗುತ್ತಿರುವುದು ನಿಜವೇ ; ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ರಾಜ್ಯಾದಾದ್ಯಂತ ಕಳೆದ ೨ ವರ್ಷಗಳಿಂದ ಎಷ್ಟು ಅಪಘಾತಗಳು ದಾಖಲಾಗಿವೆ ; ಎಷ್ಟು ಪರಿಹಾರ ಸರ್ಕಾರದಿಂದ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ‘‘ಮಾಡ್ಯೂಲರ್ ಎಂಪ್ಲಾಯಿಮೆಂಟ್’’ ಯೋಜನೆ ಅಡಿಯಲ್ಲಿ ನಡೆಸಿದ ತರಬೇತಿ ಕಾರ್ಯಕ್ರಮಗಳ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮೩ (೬೧೧) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಜಾರಿಯಲ್ಲಿರುವ ಕೇಂದ್ರ ಸರಕಾರದ ‘‘ ಮಾಡ್ಯೂಲರ್ ಎಂಪ್ಲಾಯಿಮೆಂಟ್ ’’ ಯೋಜನೆ ಅಡಿಯಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಎಷ್ಟು ತರಬೇತಿ ಕಾರ್ಯಕ್ರಮಗಳು ನಡೆದಿವೆ ; ತರಬೇತಿ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಈ ಯೋಜನೆಗೆಂದು ಕಳೆದ ಒಂದು ವರ್ಷದ ಅವಧಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆಗೊಂಡಿರುವ ಹಣ ಎಷ್ಟು ; ಎಷ್ಟು ಹಣ ತರಬೇತಿಗಳಿಗಾಗಿ ವೆಚ್ಚ ಮಾಡಲಾಗಿದೆ ?

## ಬಯಲು ಸೀಮೆ ಅಭಿವೃದ್ಧಿ ಮಂಡಳಿ ಅನುದಾನವನ್ನು ವಿಧಾನ ಪರಿಷತ್ ಸದಸ್ಯರಿಗೂ ಒದಗಿಸುವ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೮೪ (೭೩೦) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಯಲು ಸೀಮೆ ಅಭಿವೃದ್ಧಿ ಮಂಡಳಿಯಲ್ಲಿ ವಿಧಾನ ಪರಿಷತ್ ಸದಸ್ಯರನ್ನು ಮಂಡಳಿಯ ಸದಸ್ಯರನ್ನಾಗಿ ಸರ್ಕಾರ ನಿಯೋಜಿಸಿದ್ದರೂ ಅವರಿಗೆ ಅನುದಾನ ಒದಗಿಸದಿರಲು ಕಾರಣಗಳೇನು ;

(ಆ) ಒಂದು ವೇಳೆ ಈ ಹಿಂದೆ ವಿಧಾನ ಪರಿಷತ್ ಸದಸ್ಯರಿಗೆ ಅನುದಾನ ಒದಗಿಸಿದ್ದಲ್ಲಿ ಇಲ್ಲಿಯವರೆಗೆ ಒದಗಿಸಿದ ಅನುದಾನ ಎಷ್ಟು ;

(ಇ) ಒಂದು ವೇಳೆ ಅನುದಾನ ಒದಗಿಸದೇ ಇದ್ದಲ್ಲಿ ವಿಧಾನ ಪರಿಷತ್ ಸದಸ್ಯರಿಗೆ ಅನುದಾನ ಒದಗಿಸುವ ಬಗ್ಗೆ ಯಾವಾಗ ಆದೇಶ ಹೊರಡಿಸಲಾಗುವುದು ?

## ಹೋಬಳಿಗೊಂದು ವಸತಿ ಶಾಲೆ ಆರಂಭಿಸುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೮೫ (೩೫೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಈ ವರ್ಷದಲ್ಲಿ ಹೊಬಳಿಗೊಂದು ವಸತಿ ಶಾಲೆಯನ್ನು ಆರಂಭಿಸಲಾಗುವುದೆಂದು ಮುಂಗಡ ಪತ್ರದಲ್ಲಿ ಹೊರಡಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ರಾಜ್ಯದ ಯಾವ ಯಾವ ಹೋಬಳಿಗಳಲ್ಲಿ ವಸತಿ ಶಾಲೆಗಳನ್ನು ಆರಂಭಿಸಲಾಗಿದೆ ?

## ಹಿಂದುಳಿದ ವಿದ್ಯಾರ್ಥಿಗಳಿಗೂ ಶಿಷ್ಯ ವೇತನ ನೀಡುವ ಕುರಿತು

**ಶ್ರೀ ರಘುನಾಥರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೮೬ (೬೧೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡಲಾಗಿದೆಯೇ ; (ನೀಡಿದ್ದಲ್ಲಿ, ಆಯಾ ವಿದ್ಯಾರ್ಥಿ / ವಿದ್ಯಾರ್ಥಿನಿಯರ, ಶಾಲಾ / ಕಾಲೇಜಿನವಾರು, ವಿದ್ಯಾರ್ಥಿಗಳವಾರು ಸಂಪೂರ್ಣ ವಿವರ ನೀಡುವುದು)

(ಆ) ಶಿಷ್ಯವೇತನ ಅರ್ಹ ವಿದ್ಯಾರ್ಥಿಗಳಿಗೆ ಶಾಲಾ/ಕಾಲೇಜು ಮಟ್ಟದಲ್ಲಿ ಪ್ರತ್ಯೇಕವಾಗಿ ಪ್ರತಿ ವಿದ್ಯಾರ್ಥಿಗಳಿಗೆ ಎಷ್ಟು ನೀಡಲಾಗಿದೆ ; (ನೀಡಿದ್ದಲ್ಲಿ, ಚೆಕ್ಕಿನ ಸಂಖ್ಯೆ ಮತ್ತು ದಿನಾಂಕದ ವಿವರ ನೀಡುವುದು)

(ಇ) ಶಿಷ್ಯವೇತನ ಮಂಜೂರಾತಿಗಾಗಿ ವೆರಿಫಿಕೇಷನ್ ಅಧಿಕಾರಿಗಳನ್ನು ನೇಮಿಸಲಾಗಿದೆಯೇ ; ನೇಮಿಸಿದ್ದಲ್ಲಿ, ಅವರಿಗ ಗಣಕಯಂತ್ರದ ತರಬೇತಿ ನೀಡಲಾಗಿದೆಯೇ ? (ನೀಡಿದ್ದಲ್ಲಿ, ಅವರ ತರಬೇತಿಯ ಅರ್ಹತೆ ಪ್ರಮಾಣ ಪತ್ರದ ಪ್ರತಿಯ ವಿವರ ಒದಗಿಸುವುದು)

## ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆಯಾಗುತ್ತಿರುವ ಅನುದಾನ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮೭ (೩೬೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷಗಳಲ್ಲಿ ರಾಮನಗರ ಜಿಲ್ಲೆಗೆ ಸಮಾಜ ಕಲ್ಯಾಣ ಇಲಾಖೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; ಖರ್ಚು ಮಾಡಲಾದ ಮೊತ್ತವೆಷ್ಟು ; ಖರ್ಚಾಗದೆ ಉಳಿದ ಮೊತ್ತವೆಷ್ಟು ; (ವರ್ಷವಾರು, ಲೆಕ್ಕಶೀರ್ಷಿಕೆವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯೋಜನೆಗಳನ್ನು / ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ? (ತಾಲ್ಲೂಕುವಾರು, ಯೋಜನಾವಾರು ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೮೮ (೩೫೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳ ಆಸ್ಪತ್ರೆಗಳಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು ;

(ಇ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ತೆಗೆದುಕೊಂಡಿರುವ ಕ್ರಮಗಳೇನು ;

(ಈ) ರಾಯಚೂರು ಜಿಲ್ಲೆಯಲ್ಲಿರುವ ಆಯುರ್ವೇದ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ಸದರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮಗಳೇನು ;

(ಉ) ನೂತನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು ?

## ಕೊಡಗು ಜಿಲ್ಲೆಯ ಪಡಿತರ ಚೀಟಿದಾರರಿಗೆ ಸೀಮೆ ಎಣ್ಣೆ ವಿತರಿಸುವ ಬಗ್ಗೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮೯ (೩೬೦) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ಮಳೆಗಾಲದಲ್ಲಿ ವಿದ್ಯುತ್ ಅಭಾವವಿರುವುದರಿಂದ ಜಿಲ್ಲೆಯ ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಪಡಿತರ ಚೀಟಿದಾರರಿಗೆ ಸೀಮೆ ಎಣ್ಣೆ ವಿತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಇಲ್ಲವಾದಲ್ಲಿ, ಸದರಿ ಜಿಲ್ಲೆಯ ಸಮಸ್ಯೆಯನ್ನು ಪರಿಗಣಿಸಿ ಸಬ್ಸಿಡಿ ರಹಿತ ಸೀಮೆಎಣ್ಣೆ ದೊರಕಿಸಿಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಗ್ರಾಹಕರ ನ್ಯಾಯಾಲಯದ ನಿರ್ವಹಣೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೦ (೩೫೫) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಗ್ರಾಹಕರ ಹಕ್ಕು ಭಾದ್ಯತೆಗಳನ್ನು ಕಾಪಾಡಲು ರಾಜ್ಯ ಗ್ರಾಹಕ ದೂರುದಾರ ನ್ಯಾಯಾಲಯ ಮತ್ತು ಜಿಲ್ಲಾ ಗ್ರಾಹಕ ನ್ಯಾಯಾಲಯ ಸ್ಥಾಪಿತವಾಗಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿವೆಯೇ ;

(ಆ) ರಾಜ್ಯ ಗ್ರಾಹಕರ ವೇದಿಕೆ ನ್ಯಾಯಾಲಯ ಹಾಗೂ ಜಿಲ್ಲಾ ಗ್ರಾಹಕ ನ್ಯಾಯಾಲಯಗಳಲ್ಲಿ ಪೂರ್ಣ ಪ್ರಮಾಣದಲ್ಲಿ ನ್ಯಾಯಾಧೀಶರ ಹುದ್ದೆ ತುಂಬಲಾಗಿದೆಯೇ ;

(ಇ) ರಾಜ್ಯ ಮತ್ತು ಜಿಲ್ಲಾ ಗ್ರಾಹಕರ ನ್ಯಾಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳು ಎಷ್ಟು ; (ನ್ಯಾಯಾಧೀಶರು, ಸದಸ್ಯರು, ಸೇರಿದಂತೆ ಎಲ್ಲಾ ಹುದ್ದೆಯ ಸಂಪೂರ್ಣ ವಿವರ ನೀಡುವುದು)

(ಈ) ಖಾಲಿ ಹುದ್ದೆ ತುಂಬಲು ಇರುವ ತೊಡಕುಗಳೇನು ; ಎಂದು ತುಂಬಲಾಗುವುದು;

(ಉ) ಜಿಲ್ಲಾ ಗ್ರಾಹಕರ ಮಾಹಿತಿ ಮತ್ತು ತರಬೇತಿ ಕೇಂದ್ರಕ್ಕೆ ಅನುದಾನದ ಕೊರತೆಯಿದ್ದು, ಜಿಲ್ಲಾ ಪಂಚಾಯತ್ ಪ್ರಸ್ತಾವನೆ ಹೊರತಾಗಿಯೂ ಅನುದಾನ ಬಿಡುಗಡೆ ಮಾಡದಿರಲು ಕಾರಣವೇನು ; ಮೇಲಿನ ಎಲ್ಲಾ ಸಮಸ್ಯೆಗಳಿಗೆ ಎಂದು ಯಾವ ರೀತಿಯಲ್ಲಿ ಪರಿಹಾರ ಒದಗಿಸಲಾಗುವುದು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500